**Akashvani : Bangalore**
**Regional Bulletin In Kannada**
**09.10.2025 / 6.40 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**09.10.2025 / 6.40 pm**

**<><*<><>*><>**

<u>ಮುಖ್ಯಾಂಶಗಳು</u>

೧. ಮಹಿಳೆಯರಿಗೆ ತಿಂಗಳಲ್ಲಿ ಒಂದು ದಿನ ವೇತನ ಸಹಿತ ಋತುಚಕ್ರ ರಜೆ ; ಸಚಿವ ಸಂಪುಟ ಸಭೆ ಅನುಮೋದನೆ

೨. ಅನ್ನಭಾಗ್ಯ ಯೋಜನೆಯಲ್ಲಿ ೫ ಕೆ.ಜಿ.ಅಕ್ಕಿಯ ಬದಲು ಇಂದಿರಾ ಆಹಾರ ಕಿಟ್ ನೀಡಲು ಸರ್ಕಾರ ನಿರ್ಧಾರ

೩. ನಾಳೆಯಿಂದ ಭಕ್ತರಿಗೆ ಹಾಸನಾಂಬೆ ದರ್ಶನ; ಹೆಲಿಟೂರಿಸಂಗೆ ಚಾಲನೆ ನೀಡಿದ ಸಚಿವ ಕೃಷ್ಣ ಭೈರೇಗೌಡ

೪. ಏಳು ವರ್ಷಗಳ ಕಾಲ ವಕೀಲಿ ವೃತ್ತಿ ನಡೆಸಿದರೆ ಜಿಲ್ಲಾ ನ್ಯಾಯಾಧೀಶರ ಹುದ್ದೆಗೆ ಅರ್ಹರು ; ಸುಪ್ರೀಂಕೋರ್ಟ್

೫. ಬೆಳಗಾವಿ-ಮೀರಜ್ ನಡುವೆ ಪ್ಯಾಸೆಂಜರ್ ರೈಲು ಸಂಚಾರ ; ಕೇಂದ್ರ ರೈಲ್ವೆ ಮಂಡಳಿ ಆದೇಶ

*************

ಮಹಿಳೆಯರಿಗೆ ರಾಜ್ಯ ಸರ್ಕಾರ ಸಿಹಿಸುದ್ದಿ ನೀಡಿದೆ. ಮುಟ್ಟಿನ ಸಂದರ್ಭದಲ್ಲಿ ಒಂದು ದಿನ ವೇತನ ಸಹಿತ ರಜೆ ನೀಡಲು ರಾಜ್ಯ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಮಾಹಿತಿ ನೀಡಿದ್ದಾರೆ. ಸಚಿವ ಸಂಪುಟ ಸಭೆಯ ಬಳಿಕ ವಿವರ ನೀಡಿದ ಅವರು ರಾಜ್ಯದ ಸರ್ಕಾರಿ ಕಚೇರಿಗಳು, ಗಾರ್ಮೆಂಟ್ಸ್, ಬಹುರಾಷ್ಟ್ರೀಯ

ಕಂಪನಿಗಳು, ಐಟಿ ಖಾಸಗಿ ಕೈಗಾರಿಕಾ ವಲಯಗಳಲ್ಲಿ ಮುಟ್ಟಿನ ರಜೆ ಅನ್ವಯವಾಗಲಿದೆ ಎಂದು ಹೇಳಿದ್ದಾರೆ.

**ಧ್ವನಿ : ಸಚಿವ ಹೆಚ್.ಕೆ.ಪಾಟೀಲ್( ೩೦ ಸೆಕೆಂಡುಗಳು)**

**************

ಬಿಪಿಎಲ್ ಹಾಗೂ ಅಂತ್ಯೋದಯ ಕಾರ್ಡುಗಳಿಗೆ ಅನ್ನಭಾಗ್ಯದ ೧೦ ಕೆಜಿ ಅಕ್ಕಿ ಬದಲು ೫ ಕೆಜಿ ಅಕ್ಕಿ ಹಾಗೂ ಉಳಿದ ೫ ಕೆಜಿ ಅಕ್ಕಿ ಲೆಕ್ಕದಲ್ಲಿ ಆಹಾರ ಧಾನ್ಯದ ಮೂಲಕ ಇಂದಿರಾ ಕಿಟ್ ನೀಡಲು ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.

**ಧ್ವನಿ: ಹೆಚ್.ಕೆ.ಪಾಟೀಲ್,**

ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಕನಕಪುರದಲ್ಲಿ ನೂತನ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಹಾಗೂ ಸ್ವಾಯತ್ತ ಸ್ಥಾನಮಾನದೊಂದಿಗೆ ೧೫೦ ಎಂಬಿಬಿಎಸ್ ಪ್ರವೇಶ ಮಿತಿಯೊಂದಿಗೆ ಆರಂಭಿಸಲು ಸಂಪುಟ ಸಭೆ ಅನುಮೋದನೆ ನೀಡಿದೆ. ೫ನೇ ರಾಜ್ಯ ಹಣಕಾಸು ಆಯೋಗದ ಅವಧಿಯನ್ನು ವಿಸ್ತರಿಸುವ ಬಗ್ಗೆಯೂ ಸಂಪುಟ ಹಸಿರು ನಿಶಾನೆ ತೋರಿದೆ. ಪ್ರಸಕ್ತ ಸಾಲಿನ ರಸಗೊಬ್ಬರ ದಾಸ್ತಾನಿಗೆ ೨೦೦ ಕೋಟಿ ರೂಪಾಯಿ ಹಾಗೂ ರಾಜ್ಯ ಸಿವಿಲ್ ಹುದ್ದೆಗಳ ನೇರ ನೇಮಕಾತಿಯಲ್ಲಿ ಎಲ್ಲಾ ಪ್ರವರ್ಗದ ಗರಿಷ್ಠ ವಯೋಮಿತಿಯಲ್ಲಿ ೩ ವರ್ಷ ಸಡಿಲಿಸಿ ಹೊರಡಿಸಿರುವ ಆದೇಶಕ್ಕೆ ಅನುಮೋದನೆ ನೀಡಿದೆ.

**************

ಹಾಸನದ ಪುರಾಣ ಪ್ರಸಿದ್ಧ ಹಾಸನಾಂಬ ದೇಗುಲದ ಗರ್ಭಗುಡಿ ಬಾಗಿಲನ್ನು ಇಂದು ಶಾಸ್ತ್ರೋಕ್ತ ವಿಧಿವಿಧಾನಗಳೊಂದಿಗೆ ತೆರೆಯಲಾಗಿದೆ. ಮಧ್ಯಾಹ್ನ ಅರಸು ವಂಶಸ್ಥ ನಂಜ ರಾಜೇ ಅರಸ್ ಅವರು ಬಾಳೆಗೊನೆ ಕಡಿದ ಬಳಿಕ ಬಾಗಿಲನ್ನು

ತೆರೆಯಲಾಯಿತು. ವರ್ಷಕ್ಕೊಮ್ಮೆ ಮಾತ್ರ ಹಾಸನಾಂಬ ದೇವಿ ದರ್ಶನಕ್ಕೆ ಅವಕಾಶವಿದೆ. ಇಂದು ದೇವಿಗೆ ಆಭರಣ ಹಾಗೂ ಪುಷ್ಪಾಲಂಕಾರ ಮಾಡಲಾಗಿದೆ. ನಾಳೆಯಿಂದ ಸಾರ್ವಜನಿಕರು ಇದೇ ೨೩ರವರೆಗೆ ಭಕ್ತರು ದೇವಿಯ ದರ್ಶನ ಪಡೆಯಬಹುದು. ಸಿದ್ದೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಹಾಸನದಲ್ಲಿ ಹೆಲಿ ಟೂರಿಸಂ ಹಾಗೂ ಕೆಎಸ್‌ಆರ್‌ಟಿಸಿ ಬಸ್ ಮೂಲಕ ಪ್ರವಾಸಿ ಸ್ಥಳಗಳ ವೀಕ್ಷಣೆಗೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಚಾಲನೆ ನೀಡಿದರು ಜಿಲ್ಲಾಧಿಕಾರಿ ಕೆ ಎಸ್ ಲತಾ ಕುಮಾರಿ ಮಾತನಾಡಿ, ಸುಮಾರು ಏಳು ನಿಮಿಷಗಳ ಕಾಲ ಹೆಲಿಕಾಪ್ಟರ್ ಮೂಲಕ ಬೇಲೂರು, ಹಳೇಬೀಡು, ಸೀಗೆಗುಡ್ಡ, ಹಾಸನಾಂಬ ದೇವಾಲಯ ಹೀಗೆ ಹಲವು ಪ್ರವಾಸಿ ಸ್ಥಳಗಳನ್ನು ಆಗಸದಿಂದ ವೀಕ್ಷಿಸುವ ಸುವರ್ಣ ಅವಕಾಶವನ್ನು ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಜಿಲ್ಲಾಧಿಕಾರಿ ಕೆ ಎಸ್ ಲತಾ ಕುಮಾರಿ, ( ೧೭ ಸೆಕೆಂಡುಗಳು)**

**************

ಏಳು ವರ್ಷಗಳ ಕಾಲ ವಕೀಲರಾಗಿ ಸೇವೆ ಸಲ್ಲಿಸಿದ ನ್ಯಾಯಾಂಗ ಅಧಿಕಾರಿಗಳು ಜಿಲ್ಲಾ ನ್ಯಾಯಾಧೀಶರ ಹುದ್ದೆಗೆ ನೇರ ನೇಮಕಾತಿಗೆ ಅರ್ಜಿ ಸಲ್ಲಿಸಲು ಅರ್ಹರು ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದೆ. ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ನೇತೃತ್ವದ ಸಂವಿಧಾನ ಪೀಠವು ಹಲವಾರು ನಿರ್ದೇಶನಗಳನ್ನು ನೀಡಿದೆ. ಜೊತೆಗೆ ಅರ್ಜಿ ಸಲ್ಲಿಸುವ ಸಮಯದಲ್ಲಿ ಅರ್ಹತೆಯನ್ನು ನಿರ್ಧರಿಸಬೇಕು ಎಂದು ನ್ಯಾಯಮೂರ್ತಿಗಳಾದ ಎಂ.ಎಂ. ಸುಂದ್ರೇಶ್, ಅರವಿಂದ್ ಕುಮಾರ್, ಎಸ್‌ಸಿ ಶರ್ಮಾ ಮತ್ತು ಕೆ. ವಿನೋದ್ ಚಂದ್ರನ್ ಅವರನ್ನೊಳಗೊಂಡ ಐದು ನ್ಯಾಯಾಧೀಶರ ಪೀಠವು ಅಭಿಪ್ರಾಯಪಟ್ಟಿದೆ.

**************

ದೀಪಾವಳಿ ಹಬ್ಬದ ಪ್ರಯುಕ್ತ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ನಿಯಂತ್ರಿಸಲು ನೈರುತ್ಯ ರೈಲ್ವೆಯು ಬೆಂಗಳೂರಿನಿಂದ ಚೆನ್ನೈ ಸೆಂಟ್ರಲ್ ರೈಲು ನಿಲ್ದಾಣಗಳ ನಡುವೆ ವಿಶೇಷ ರೈಲುಗಳನ್ನು ಓಡಿಸಲು ನಿರ್ಧರಿಸಿದೆ. ರೈಲು ಸಂಖ್ಯೆ ೦೬೨೫೫ ಕೆಎಸ್‌ಆರ್ ಬೆಂಗಳೂರು-ಚೆನ್ನೈ ಸೆಂಟ್ರಲ್ ವಿಶೇಷ ಎಕ್ಸ್‌ಪ್ರೆಸ್ ಇದೇ ೧೮, ೨೧ ಮತ್ತು ೨೫ರಂದು ಬೆಂಗಳೂರಿನಿಂದ ಹೊರಟು ಮಧ್ಯಾಹ್ನ ಚೆನ್ನೈ ತಲುಪಲಿದೆ.

**************

ಬೆಳಗಾವಿ ಜಿಲ್ಲೆಯ ಜನರ ಬಹುದಿನಗಳ ಬೇಡಿಕೆಯಾಗಿದ್ದ ಬೆಳಗಾವಿ-ಮೀರಜ್ ನಡುವೆ ಪ್ರತಿದಿನ ಸಂಚರಿಸುತ್ತಿದ್ದ ವಿಶೇಷ ಏಕ್ಸ್‌ಪ್ರೆಸ್ ಪ್ಯಾಸೆಂಜರ್ ರೈಲನ್ನು ಪ್ಯಾಸೆಂಜರ್ ರೈಲಾಗಿ ಬದಲಾವಣೆ ಮಾಡಿ ಕೇಂದ್ರ ರೈಲ್ವೆ ಮಂಡಳಿ ಆದೇಶಿಸಿದೆ ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ತಿಳಿಸಿದ್ದಾರೆ. ಇಂದು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕೊರೊನಾ ಸಂದರ್ಭದಲ್ಲಿ ಬೆಳಗಾವಿ ಮಿರಜ್ ಪ್ಯಾಸೆಂಜರ್ ರೈಲು ಸಂಚಾರ ನಿಲ್ಲಿಸಲಾಗಿತ್ತು. ಕಳೆದ ಎರಡು ವರ್ಷದಿಂದ ವಿಶೇಷ ಎಕ್ಸ್‌ಪ್ರೆಸ್ ಪ್ಯಾಸೆಂಜರ್ ರೈಲು ಸಂಚರಿಸುತ್ತಿದೆ. ಈಗ ಪ್ರತಿದಿನ ಪ್ಯಾಸೆಂಜರ್ ರೈಲಾಗಿ ಸಂಚರಿಸಲಿದೆ. ಇದರಿಂದ ಟಿಕೆಟ್ ಬೆಲೆ ಕಡಿತಗೊಂಡು, ಉದ್ಯೋಗಿಗಳು, ಕಾರ್ಮಿಕರು, ವಿದ್ಯಾರ್ಥಿಗಳು, ವೈದ್ಯಕೀಯ ಚಿಕಿತ್ಸೆಗಾಗಿ ಬರುವವರಿಗೆ ಅನುಕೂಲಕರವಾಗಲಿದೆ ಎಂದು ತಿಳಿಸಿದ್ದಾರೆ.

**************

ಬೆಳಗಾವಿ ಜಿಲ್ಲೆಯ ಸವದತ್ತಿ ರೇಣುಕಾ ದೇವಿ ದರ್ಶನಕ್ಕೆ ತೆರಳುವ ಭಕ್ತರು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ದೀಪಾವಳಿ ಅಮಾವಾಸ್ಯೆವರೆಗೆ ಶುಕ್ರವಾರ,

ರವಿವಾರ ಹಾಗೂ ಮಂಗಳವಾರ ಹುಬ್ಬಳ್ಳಿ ಹಾಗೂ ನವಲಗುಂದದಿಂದ ಯಲ್ಲಮ್ಮನ ಗುಡ್ಡಕ್ಕೆ ನೇರವಾಗಿ ವಿಶೇಷ ಬಸ್ ಗಳ ವ್ಯವಸ್ಥೆ ಮಾಡಲಾಗಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಎಚ್. ರಾಮನಗೌಡರ ತಿಳಿಸಿದ್ದಾರೆ. ಈಗಾಗಲೇ ೪ ಸಾವಿರದ ೩೦೦ಕ್ಕೂ ಹೆಚ್ಚು ಭಕ್ತರು ಯಲ್ಲಮ್ಮನಗುಡ್ಡಕ್ಕೆ ಹೋಗಿ ರೇಣುಕಾ ದೇವಿಯ ದರ್ಶನ ಪಡೆದು ಬಂದಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

**************

ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಹೊರ್ತಿ ಕೆರೆ ಹಾಗೂ ತಡವಲಗಾ ಕಾಲುವೆಗೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹೊರ್ತಿ ಕೆರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಕೆರೆ ಭರ್ತಿಯಾಗಿ ಏರಿ ಕುಸಿತ ಕಂಡ ಹಿನ್ನೆಲೆಯಲ್ಲಿ ರೈತರ ಹೊಲಗಳಿಗೆ ನೀರು ಹರಿದು ಬೆಳೆ ಹಾನಿಯಾಗಿದೆ. ಈ ಪ್ರದೇಶವನ್ನು ಸಮೀಕ್ಷೆ ನಡೆಸಿ ವಿಪತ್ತು ಪರಿಹಾರ ನಿಧಿಯಡಿ ಪರಿಹಾರ ಒದಗಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಹೊರ್ತಿ ಕೆರೆ ದುರಸ್ತಿಗೆ ಸಂಬಂಧಿಸಿದಂತೆ ಸೂಕ್ತ ಕ್ರಿಯಾಯೋಜನೆ ಸಿದ್ಧಪಡಿಸಿ ದುರಸ್ತಿ ಕಾಮಗಾರಿ ಕೈಗೊಂಡು ಯಾವುದೇ ಹಾನಿಯಾಗದಂತೆ ಮುಂಜಾಗ್ರತಾ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**************

ಉಡುಪಿ ತಾಲೂಕಿನಲ್ಲಿ ಕೋಟ್ಪಾ ಕಾಯ್ದೆಯಡಿ ತಾಲೂಕು ತಂಬಾಕು ನಿಯಂತ್ರಣ ದಳ, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ, ಸರ್ವಿಸ್ ಬಸ್ ನಿಲ್ದಾಣ, ಉಡುಪಿ ಸಿಟಿ ಬಸ್ ನಿಲ್ದಾಣಗಳ ಸಮೀಪ ತಂಬಾಕು ಮಾರಾಟದ ಅಂಗಡಿ, ಬಾರ್ ಹಾಗೂ ರೆಸ್ಟೋರೆಂಟ್

ಗಳಿಗೆ ದಾಳಿ ನಡೆಸಿ ೫ಲ ಪ್ರಕರಣಗಳನ್ನು ದಾಖಲಿಸಿದೆ. ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಮಾಹಿತಿ ಕರಪತ್ರಗಳನ್ನು ನೀಡಿ, ನಾಮಫಲಕಗಳನ್ನು ಅಳವಡಿಸಲಾಯಿತು.

**************

ಗ್ರಾಮೀಣ ಪ್ರದೇಶಗಳಲ್ಲಿ ಜಲಮೂಲಗಳ ಸಂರಕ್ಷಣೆ, ಅಂತರ್ಜಲ ವೃದ್ಧಿ ಮತ್ತು ಮಳೆ ನೀರು ಸಂಗ್ರಹಣೆ ಕಾರ್ಯಗಳಲ್ಲಿ ಯಶಸ್ವಿ ಅನುಷ್ಠಾನ ಮಾಡಿದ ಕೋಲಾರ ಜಿಲ್ಲೆಗೆ ಕೇಂದ್ರ ಸರ್ಕಾರದ ಜಲಶಕ್ತಿ ಇಲಾಖೆ ನೀಡುವ ಜಲ ಸಂಚಯನ್ ಜಲ್ ಭಾಗೀಧಾರಿ ರಾಷ್ಟ್ರೀಯ ಪ್ರಶಸ್ತಿ ಲಭಿಸಿದೆ. ಈ ಪ್ರಶಸ್ತಿಯು ೧೫ ಲಕ್ಷ ರೂಪಾಯಿ ನಗದು ಬಹುಮಾನ ಒಳಗೊಂಡಿದೆ. ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಮತ್ತು ನರೇಗಾ ಯೋಜನೆಯಡಿ  ಜಲಮೂಲಗಳ ಸಂರಕ್ಷಣೆ, ಅಂತರ್ಜಲ ಅಭಿವೃದ್ಧಿ, ಕೃಷಿಗೆ ಅಗತ್ಯ ನೀರಿನ ಒದಗಿಸುವುದು ಹಾಗೂ ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಉದ್ದೇಶದೊಂದಿಗೆ ಕೈಗೊಂಡ ಯೋಜನೆಯಲ್ಲಿ ಕೋಲಾರ ಜಿಲ್ಲೆ ಮುಂಚೂಣಿಯಲ್ಲಿದೆ.

**************

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಶೇಕಡ ೭೯.೨ ರಷ್ಟು ಕುಟುಂಬಗಳ ಸಮೀಕ್ಷಾ ಕಾರ್ಯ ಪೂರ್ಣಗೊಳಿಸಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ಜಿಲ್ಲೆಯಲ್ಲಿ ೩ ಲಕ್ಷದ ಲ೫ ಸಾವಿರದ ೨೩೭ ಕಟುಂಬಗಳಿದ್ದು ೧೧ ಲಕ್ಷದ ೨೬ ಸಾವಿರದ ೩೫೭ ಜನಸಂಖ್ಯೆ ಇದೆ. ಇದುವರೆಗೆ ೨ ಲಕ್ಷದ ೬೫ ಸಾವಿರದ ೧೧೯ ಕುಟುಂಬಗಳ ೯ ಲಕ್ಷದ ೩ಸಾವಿರದ೭೪೨ ಜನರ ಸಮೀಕ್ಷೆ ನಡೆಸಲಾಗಿದೆ. ನಿಗದಿತ

ಅವಧಿಯೊಳಗೆ ಜಿಲ್ಲೆಯಲ್ಲಿ ಶೇಕಡ ೧೦೦ರಷ್ಟು ಸಮೀಕ್ಷೆ ಕಾರ್ಯ ಪೂರ್ಣಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**************

ಕಬ್ಬು ಬೆಳೆಗಾರರ ಪ್ರಮುಖ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಅವರಿಗೆ ಜಿಲ್ಲಾಡಳಿತದಿಂದ ಎಲ್ಲಾ ರೀತಿಯ ಬೆಂಬಲ ನೀಡಲಾಗುವುದು ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಭರವಸೆ ನೀಡಿದ್ದಾರೆ.

**************